# ಕರ್ನಾಟಕ ವಿಧಾನ ಪರಿಷತ್

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **1414 (1589)** |
| 2 | ಸದಸ್ಯರ ಹೆಸರು | : | **ಶ್ರೀ ಪಿ.ಹೆಚ್.ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)** |
| 3 | ಉತ್ತರಿಸುವ ದಿನಾಂಕ | : | 19.12.2025 |
| 4 | ಉತ್ತರಿಸುವ ಸಚಿವರು | : | ಮಾನ್ಯ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿಯ ಪ್ರಾದೇಶಿಕ ವಲಯ ಕಚೇರಿಯನ್ನು ಬಾಗಲಕೋಟೆಯಲ್ಲಿ ಪ್ರಾರಂಭಿಸಲು ಸರ್ಕಾರವು ಸಂಖ್ಯೆ:ಪಿಡಿ/ 39/ಪಿಟಿಪಿ/ 2014, ದಿನಾಂಕ:09.10.2015 ರಂದು ಆದೇಶ ಹೊರಡಿಸಿ: ದಿನಾಂಕ:19-10-2015 ರಂದು ಜಿಲ್ಲಾಡಳಿತ ಭವನದಲ್ಲಿ ಸ್ಥಾಪನೆಗೊಂಡಿರುವುದೇ; ಈ ಕಛೇರಿಯು ತನ್ನ ಕಾರ್ಯ ಚಟುವಟಿಕೆಗಳನ್ನು ಪ್ರಾರಂಭಿಸದೇ ಕೇವಲ ನಾಮಫಲಕ ಮಾತ್ರ ನೇತಾಡುತ್ತಿದ್ದು; ಸಮರ್ಪಕವಾದ ಸಂವಾಹನ ಕೊರತೆಯಿಂದ ಉತ್ತರ ಕರ್ನಾಟಕ ಭಾಗದ ಬಯಲುಸೀಮೆ ಪ್ರದೇಶಗಳ ಅಭಿವೃದ್ಧಿಯು ಕುಂಠಿತವಾಗಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; | ಚಿತ್ರದುರ್ಗ ಜಿಲ್ಲೆಯನ್ನು ಕೇಂದ್ರಸ್ಥಾನವನ್ನಾಗಿ ಆಯ್ಕೆಮಾಡಿ ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿಯನ್ನು ತೆರೆಯಲಾಗಿದೆ. ಬಾಗಲಕೋಟೆಯಲ್ಲಿ ಕಛೇರಿ ತೆರೆಯುವ ಅಗತ್ಯತೆ ಇರುವುದಿಲ್ಲ.<br><br>ಉತ್ತರ ಕರ್ನಾಟಕ ಭಾಗವು ಅಭಿವೃದ್ಧಿಯಲ್ಲಿ ಕುಂಠಿತವಾಗಿರುವುದನ್ನು ಆಧಾರವಾಗಿಟ್ಟುಕೊಂಡು ಡಾ\|\| ಡಿ.ಎಂ. ನಂಜುಂಡಪ್ಪ ವರದಿ ಸೂಚ್ಯಾಂಕದನ್ವಯ ಶೇ.60 ರಷ್ಟು ಅನುದಾನವನ್ನು (ಕಲಬುರಗಿ ಶೇ.40, ಬೆಳಗಾವಿ ಶೇ.20) ವಿಶೇಷ ಅಭಿವೃದ್ಧಿ ಯೋಜನೆಯಡಿ ಅನುದಾನ ನೀಡಲಾಗುತ್ತಿದೆ. |
| (ಆ) | ಬಂದಿದ್ದರೇ, ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಕೇವಲ ನಾಮಫಲಕಕ್ಕೆ ಸೀಮಿತವಾಗದೇ ಅಭಿವೃದ್ಧಿ ಮತ್ತು ಆಡಳಿತಾತ್ಮಕ ದೃಷ್ಟಿಯಿಂದ ಪ್ರಾದೇಶಿಕ ವಲಯ ಕಛೇರಿಯನ್ನು ಪೂರ್ಣ ಪ್ರಮಾಣದಲ್ಲಿ ಯಾವಾಗ ಪ್ರಾರಂಭ ಮಾಡಲಾಗುವುದು? (ವಿವರಿಸುವುದು); | ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿಯ ಪ್ರಾದೇಶಿಕ ಕಛೇರಿಯನ್ನು ಬಾಗಲಕೋಟೆಯಲ್ಲಿ ತೆರೆಯುವ ಯಾವುದೆ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ. |

**ಸಂಖ್ಯೆ: ಪಿಡಿಎಸ್ 98 ಪಿಟಿಪಿ 2025**

**(ಡಿ.ಸುಧಾಕರ್)**
ಯೋಜನೆ, ಕಾರ್ಯಕ್ರಮ ಸಂಯೋಜನೆ
ಮತ್ತು ಸಾಂಖ್ಯಿಕ ಇಲಾಖೆ ಸಚಿವರು